ಪ್ರತಿಯೊಂದು ಶಾಲೆಗೂ ಒಂದು ಪೋಷಕ ಸಮಿತಿ ಇರುತ್ತದೆ. ಈ ಸಮಿತಿಯು 9 ಜನ ಪೋಷಕ ಪ್ರತಿನಿಧಿಗಳನ್ನು ಆಯ್ಕೆ ಮಾಡುತ್ತದೆ. ಸಮಿತಿಯ ಅಧ್ಯಕ್ಷರ ಹೆಸರನ್ನು ಸ್ಥಳೀಯ ವಿಧಾನ ಸಭಾ ಸದಸ್ಯರು ನಾಮನಿರ್ದೇಶನ ಮೂಲಕ ಅನುಮೋದಿಸುತ್ತಾರೆ.

ಆ) 1. ಶಾಲೆಯ ವ್ಯಾಪ್ತಿಯಲ್ಲಿನ, ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು ಶಾಲೆಗೆ ದಾಖಲು ಮಾಡುವಂತೆ ಪೋಷಕರಲ್ಲಿ ಅರಿವು ಮೂಡಿಸುವುದು ಹಾಗೂ ಆ ರೀತಿ ದಾಖಲಾದ ಮಕ್ಕಳನ್ನು ನಿಯಮಿತವಾಗಿ ಶಾಲೆಗೆ ಕಳುಹಿಸುವಂತೆ ಮಾಡುವುದು.

2. ಶಾಲೆಯ ವ್ಯಾಪ್ತಿಯಲ್ಲಿರುವ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಬರುವಂತೆ ಮಾಡಲು ದಾಖಲಾತಿ ಆಂದೋಲನ, ಬ್ರಿಜ್ಜ್ ಕೋರ್ಸ್ ಚಿಣ್ಣರ ಅಂಗಳ ಇತ್ಯಾದಿ ಕಾರ್ಯಕ್ರಮಗಳನ್ನು ಆಯೋಜಿಸುವುದು. ಶಾಲೆಯಿಂದ ಹೊರಗುಳಿದ ಮಕ್ಕಳ ಯಾದಿಯನ್ನು ತಯಾರಿಸಿ ಸಾರ್ವಜನಿಕ ಸ್ಥಳಗಳಾದ ಶಾಲೆ, ಚಾವಡಿ, ಗ್ರಾಮ ಪಂಚಾಯಿತಿ, ಸಮುದಾಯ ಭವನ ಇತ್ಯಾದಿಗಳಲ್ಲಿ ಪ್ರಸಿದ್ಧಿ ಪಡಿಸುವುದು.

3. ಶಾಲೆಯಲ್ಲಿ ಓದುವ ಎಲ್ಲಾ ಮಕ್ಕಳು ನಿರ್ದಿಷ್ಟ ಗುಣಮಟ್ಟದ ಕಲಿಕೆ ಪಡೆಯಲು ಬೇಕಾದ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದು.

4. ಶಾಲೆಯ ಆವರಣವನ್ನು ಹಾಗೂ ಕಟ್ಟಡವನ್ನು ಅತಿಕ್ರಮಣ ಹಾಗೂ ವಿನಾಶಗಳಿಂದ ಕಾಪಾಡುವುದು.

5. ವೇಳಾಪಟ್ಟಿಯಂತೆ ಪ್ರತಿ ವರ್ಷ 220 ಕಲಿಕಾ ದಿನಗಳು ಮತ್ತು ಪ್ರತಿ ದಿನ ಐದುವರೆ ಗಂಟೆಗಳ ಶಾಲೆ ನಡೆಸುವುದನ್ನು ಖಾತರಿ ಪಡಿಸಿಕೊಳ್ಳುವುದು.

6. ವರ್ಷದಲ್ಲಿ ಮೂರು ಸಲ ಅಂದರೆ ಜುಲೈ ನವೆಂಬರ್ ಹಾಗೂ ಫೆಬ್ರವರಿ ತಿಂಗಳುಗಳಲ್ಲಿ ಪೋಷಕರ ಸಭೆಗಳನ್ನು ಆಯೋಜಿಸುವುದು.

7. ಶಾಲಾ ಶಿಕ್ಷಣ ನಿಧಿ ಸ್ಥಾಪಿಸುವುದು.

ಇ) ಹೊಸದಾಗಿ ಪ್ರಾರಂಭವಾಗಿರುವ ಶಾಲೆಗಳಲ್ಲಿ ಮತ್ತು ಕೆಲವು ಶಾಲೆಗಳಲ್ಲಿ ಹಿಂದಿನ ಸಮಿತಿಗಳೇ ಮುಂದುವರೆಯಬೇಕೆಂದು ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುವುದರಿಂದ ಅಂತಹ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳು ರಚನೆಯಾಗಿರುವುದಿಲ್ಲ. ಉಳಿದಂತೆ ಸರ್ಕಾರಿ ಆದೇಶದಂತೆ ಸಮಿತಿಗಳು ರಚನೆಯಾಗಿ ಕಾರ್ಯ ನಿರ್ವಹಿಸುತ್ತಿವೆ.

ಅಕ್ಷರ ದಾಸೋಹ ಮಧ್ಯಾಹ್ನದ ಬಿಸಿ ಊಟ ಯೋಜನೆ ಬಗ್ಗೆ

3514(4080) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಕ್ಷರ ದಾಸೋಹ ಬಿಸಿ ಊಟದ ಯೋಜನೆಯನ್ನು ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗಿದೆ;

ಆ) ಪ್ರತಿ ಪ್ರಾಥಮಿಕ ಶಾಲೆಯ ಎಲ್ಲಾ ವರ್ಗದ ಮಕ್ಕಳಿಗೆ ಯೋಜನೆ ಅನ್ವಯಿಸುತ್ತದೆಯೇ;

ಇ) ರಾಜ್ಯದ ಸರ್ಕಾರಿ ಮತ್ತು ಖಾಸಗಿ ಪ್ರಾಥಮಿಕ ಶಾಲೆಗಳ ಎಲ್ಲಾ ಮಕ್ಕಳಿಗೂ ಬಿಸಿ ಊಟದ ಯೋಜನೆ ಮಾಡುವುದು ಸರ್ಕಾರದ ಕರ್ತವ್ಯವಲ್ಲವೇ; ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಎಲ್ಲಾ 27 ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗಿದೆ.

ಆ) ಅನ್ವಯಿಸುವುದಿಲ್ಲ.

ಇ) ಸಧ್ಯದಲ್ಲಿ ರಾಜ್ಯ ಸರ್ಕಾರಿ ಶಾಲೆಗಳಲ್ಲಿನ ಒಂದರಿಂದ ಐದನೆಯ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೂ ಬಿಸಿ ಊಟ ಯೋಜನೆ ಜಾರಿಯಲ್ಲಿದ್ದು ಖಾಸಗಿ ಪ್ರಾಥಮಿಕ ಶಾಲೆಗಳಲ್ಲಿನ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ವಿಸ್ತರಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿಲ್ಲ.

ರಾಜ್ಯದಲ್ಲಿರುವ ಖಾಸಗಿ ಅನುದಾನ ಸಹಿತ-ಅನುದಾನ ರಹಿತ ಶಾಲೆಗಳಿಗೆ ನಿವೇಶನ ಮತ್ತು ಕಟ್ಟಡ ಒದಗಿಸುವುದು

3515(4081) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಖಾಸಗಿ ಸಂಸ್ಥೆಗಳ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ತಾಲ್ಲೂಕುವಾರು ಮಾಹಿತಿ ನೀಡುವುದು;

ಆ) ಸರ್ಕಾರ ಉತ್ತಮ ಶಿಕ್ಷಣ ನೀಡುವ ಪ್ರಾಥಮಿಕ ಮತ್ತು ಪ್ರೌಢ ಕನ್ನಡ ಮಾಧ್ಯಮ ಶಾಲೆಗಳಿಗೆ ಅನುದಾನ ನೀಡಲು ಕ್ರಮ ಕೈಗೊಂಡಿದೆಯೇ;

ಇ) ಖಾಸಗಿ ಸಂಸ್ಥೆಗಳ ಪ್ರಾಥಮಿಕ ಮತ್ತು ಪ್ರೌಢ ಕನ್ನಡ ಶಾಲೆಗಳು (ಅನುದಾನ ರಹಿತ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳ ವಿವರ ನೀಡಿ;

ಈ) ಈ ಶಾಲೆಗಳಿಗೆ ನಿವೇಶನ ಮತ್ತು ಕಟ್ಟಡಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಲಭ್ಯವಿರುವ ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ದಿ: 1-6-1987ಕ್ಕಿಂತ ಮೊದಲು ಪ್ರಾರಂಭವಾದ ಶಾಲೆಗಳಿಗೆ ವೇತನಾನುದಾನ ನೀಡಲು ಆಸ್ಪದವಿರುತ್ತದೆ. ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ಸಂಸ್ಥೆಗಳಿಂದ ನಡೆಯುತ್ತಿರುವ ಶಾಲೆಗಳಿಗೆ ಸಂಬಂಧಿಸಿದಂತೆ, ಸದರಿ ಕಟ್ ಆಫ್ (cut off) ದಿನಾಂಕವನ್ನು 31-3-92ರ ವರೆಗೆ ವಿಸ್ತರಿಸಲಾಗಿದೆ.

ಇ) ಕ್ರೋಢೀಕೃತವಾದ ಮಾಹಿತಿ ಕೂಡಲೇ ಲಭ್ಯವಿರುವುದಿಲ್ಲ.

ಈ) - ಒದಗಿಸುತ್ತಿಲ್ಲ -

ಅನುದಾನರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಜಿಲ್ಲಾವಾರು ಪಟ್ಟಿ ದಿನಾಂಕ: 30-06-2003ರವರೆಗೆ

ಕ್ರ.	ಜಿಲ್ಲೆಯ ಹೆಸರು	ಪ್ರಾಥಮಿಕ ಶಾಲೆಗಳು	ಪ್ರೌಢ ಶಾಲೆಗಳು
1.	ಬೆಂಗಳೂರು ಉತ್ತರ	412	439
2.	ಬೆಂಗಳೂರು ದಕ್ಷಿಣ	584	516
3.	ಬೆಂಗಳೂರು ಗ್ರಾಮಾಂತರ	211	168